# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1105
ಉತ್ತರಿಸಬೇಕಾದ ದಿನಾಂಕ : 25.07.2024
ಸದಸ್ಯರ ಹೆಸರು : ಶ್ರೀ ಐವನ್ ಡಿ ಸೋಜಾ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಯವರು.

| ಕ್ರಸ | ಪ್ರಶ್ನೆ | ಉತ್ತರ |
|---|---|---|
| ಅ) | ಮಂಗಳೂರಿನಲ್ಲಿ ಸ್ಥಾಪಿಸಲು ಉದ್ದೇಶಿಸಿರುವ ರಾಷ್ಟ್ರಮಟ್ಟ ಕ್ರಿಕೆಟ್ ಕ್ರೀಡಾಂಗಣದ ಬಗ್ಗೆ ಸರ್ಕಾರ ಸ್ಥಳವನ್ನು ಗುರುತಿಸಿದ್ದರೂ, ಇನ್ನೂ ಕಾರ್ಯಗತಗೊಳಿಸಲು ಕ್ರಮಕೈಗೊಳ್ಳದಿರಲು ಕಾರಣಗಳೇನು; (ವಿವರ ನೀಡುವುದು) | ಕ್ರಿಕೆಟ್ ಕ್ರೀಡಾಂಗಣ ನಿರ್ಮಾಣಕ್ಕಾಗಿ ಮಂಗಳೂರು ತಾಲ್ಲೂಕು ಕಾವೂರು ಗ್ರಾಮದ ಸರ್ವೆ ಸಂಖ್ಯೆ-112/1ಎ ರಲ್ಲಿ 0.83 ಎಕರೆ, 139/1 ರಲ್ಲಿ 0.49 ಎಕರೆ, 142/2 ರಲ್ಲಿ 0.47 ಎಕರೆ, 138 ರಲ್ಲಿ 0.83 ಎಕರೆ ಮತ್ತು 21 ರಲ್ಲಿ 6.97 ಎಕರೆ ಸೇರಿದಂತೆ ಒಟ್ಟು 9.59 ಎಕರೆ ಜಮೀನನ್ನು ಸಹಾಯಕ ಆಯುಕ್ತರು, ಮಂಗಳೂರು ಉಪ ವಿಭಾಗ, ಮಂಗಳೂರು ರವರ ಕಛೇರಿ ನಡವಳಿ ಸಂಖ್ಯೆ: ಎಡಿಸ್.ಎಲ್.ಎನ್.ಡಿ.ಪಿ.ಡಿ.ಆರ್. 107/2021/ಇ-128540, ದಿನಾಂಕ: 23-02-2021 ರಂತೆ ಇಲಾಖೆಯ ಹೆಸರಿಗೆ ಕಾದಿರಿಸಲಾಗಿರುತ್ತದೆ.<br><br>ದಿನಾಂಕ: 14-09-2021 ರಂದು ಜಿಲ್ಲಾಧಿಕಾರಿಗಳು, ದಕ್ಷಿಣ ಕನ್ನಡ ಜಿಲ್ಲೆ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಕ್ರಿಕೆಟ್ ಕ್ರೀಡಾಂಗಣ ಅಭಿವೃದ್ಧಿಪಡಿಸುವ ಸಂಬಂಧ ತಗಲುವ ವೆಚ್ಚವನ್ನು ದಕ್ಷಿಣ ಕನ್ನಡ ಕ್ರಿಕೆಟ್ ಸಂಸ್ಥೆಯು ಭರಿಸುವುದಾಗಿ ಒಪ್ಪಿಕೊಂಡಿರುತ್ತದೆ.<br><br>ಕ್ರಿಕೆಟ್ ಕ್ರೀಡಾಂಗಣ ನಿರ್ಮಾಣಕ್ಕೆ ಕಾದಿರಿಸಲಾದ ಜಮೀನಿನ ಪಕ್ಕದಲ್ಲಿರುವ ಮನೆಗಳಿಗೆ ಬದಲಿ ಸಂಪರ್ಕ ರಸ್ತೆಯನ್ನು ಒದಗಿಸಬೇಕಾದ ಅವಶ್ಯಕತೆ ಇರುತ್ತದೆ. ಮಂಗಳೂರು ಮಹಾನಗರ ಪಾಲಿಕೆ ವತಿಯಿಂದ ಸಂಪರ್ಕ ರಸ್ತೆಯನ್ನು ನಿರ್ಮಾಣ ಮಾಡಲಾಗುತ್ತಿದೆ. ಸಂಪರ್ಕ ರಸ್ತೆಯನ್ನು ಒದಗಿಸಿದ ನಂತರ, ಕ್ರೀಡಾಂಗಣ ಅಭಿವೃದ್ಧಿಪಡಿಸಲು ದಕ್ಷಿಣ ಕನ್ನಡ ಕ್ರಿಕೆಟ್ ಸಂಸ್ಥೆ ಮೂಲಕ ಕ್ರಮವಹಿಸಲಾಗುವುದು. |
| ಆ) | ಮಂಗಳೂರಿನಲ್ಲಿ ಕ್ರಿಕೆಟ್ ಕ್ರೀಡಾಂಗಣಕ್ಕೆ ಬೇಕಾದ ಸ್ಥಳ ಮತ್ತು ಸ್ಥಾಪಿಸಲು ಬೇಕಾದ ಎಲ್ಲಾ ಮೂಲಭೂತ ಸೌಲಭ್ಯಗಳು ಇದ್ದರೂ, ಕ್ರೀಡಾ ಇಲಾಖೆ ನಿರ್ಲಕ್ಷ ತೋರಿಸುತ್ತಿದೆ ಎಂಬ ದೂರುಗಳಿದ್ದು, ಈ ಬಗ್ಗೆ ಕೂಡಲೇ ಕ್ರಮತೆಗೆದುಕೊಳ್ಳಲಾಗುವುದೇ; | ಕ್ರಿಕೆಟ್ ಕ್ರೀಡಾಂಗಣ ನಿರ್ಮಾಣಕ್ಕೆ ಕಾದಿರಿಸಲಾದ ಜಮೀನಿನ ಪಕ್ಕದಲ್ಲಿರುವ ಮನೆಗಳಿಗೆ ಬದಲಿ ಸಂಪರ್ಕ ರಸ್ತೆಯನ್ನು ಒದಗಿಸಬೇಕಾದ ಅವಶ್ಯಕತೆ ಇರುತ್ತದೆ. ಮಂಗಳೂರು ಮಹಾನಗರ ಪಾಲಿಕೆ ವತಿಯಿಂದ ಸಂಪರ್ಕ ರಸ್ತೆಯನ್ನು ನಿರ್ಮಾಣ ಮಾಡಲಾಗುತ್ತಿದೆ. ಸದರಿ ಮನೆಗಳಿಗೆ ಬದಲಿ ಸಂಪರ್ಕ ರಸ್ತೆಯನ್ನು ಒದಗಿಸಿದ ನಂತರ, ದಕ್ಷಿಣ ಕನ್ನಡ ಕ್ರಿಕೆಟ್ ಸಂಸ್ಥೆ ಮೂಲಕ ಕ್ರೀಡಾಂಗಣ ಅಭಿವೃದ್ಧಿಪಡಿಸಲು ಪರಿಗಣಿಸಲಾಗುವುದು. |
| ಇ) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ 10 ಮೆಡಿಕಲ್ ಕಾಲೇಜು, 20ಕ್ಕೂ ಹೆಚ್ಚು ಇಂಜಿನಿಯರಿಂಗ್ ಕಾಲೇಜು 5 ವಿಶ್ವವಿದ್ಯಾನಿಲಯಗಳು ಇದ್ದರೂ ವಿದ್ಯಾರ್ಥಿಗಳಿಗೆ ಕ್ರೀಡೆಯಲ್ಲಿ ಪ್ರೋತ್ಸಾಹಿಸಲು ಇಲಾಖೆ ಕೈಗೊಂಡಿರುವ ಕ್ರಮಗಳೇನು: | ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ವಿದ್ಯಾರ್ಥಿಗಳು/ ಯುವಜನರನ್ನು ಕ್ರೀಡೆಯಲ್ಲಿ ಪ್ರೋತ್ಸಾಹಿಸಲು ರಾಜ್ಯದಲ್ಲಿ ಅನುಷ್ಠಾನಗೊಳಿಸುತ್ತಿರುವ ಪ್ರಮುಖ ಕಾರ್ಯಕ್ರಮಗಳ ವಿವರಗಳನ್ನು **ಅನುಬಂಧದಲ್ಲಿ** ಇರಿಸಲಾಗಿದೆ. |

| | | |
|---|---|---|
| ಈ) | ಗ್ರಾಮೀಣ ಕ್ರೀಡೆಗಳಿಗೆ ಪ್ರೋತ್ಸಾಹ ನೀಡಲು ಮಂಗಳೂರು ಜಿಲ್ಲೆಗಳಲ್ಲಿ ಕೈಗೊಂಡ ಕ್ರಮವೇನು; | ಸರ್ಕಾರದ ವತಿಯಿಂದ ಗ್ರಾಮೀಣ ಕ್ರೀಡೆಗಳಿಗೆ ಪ್ರೋತ್ಸಾಹ ನೀಡಲು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ.<br><br>• ಮೂಡುಬಿದಿರೆಯ '**ವೀರ ರಾಣಿ ಅಬ್ಬಕ್ಕ ಸಂಸ್ಕೃತಿ ಗ್ರಾಮ**'ದಲ್ಲಿ ವೀಕ್ಷಕರ ಗ್ಯಾಲರಿ ಸೇರಿದಂತೆ ಅಗತ್ಯ ಸೌಲಭ್ಯಗಳೊಂದಿಗೆ '**ಕೋಟಿ-ಚೆನ್ನಯ್ಯ**' ಜೋಡು ಕರೆ ಕಂಬಳ ಕ್ರೀಡಾಂಗಣವನ್ನು ನಿರ್ಮಿಸಲಾಗಿದೆ.<br>• ಕಂಬಳ ಕ್ರೀಡೆಯನ್ನು ಉತ್ತೇಜಿಸಲು ಕಂಬಳ ಕ್ರೀಡಾಪಟುಗಳಿಗೆ '**ಕರ್ನಾಟಕ ಕ್ರೀಡಾ ರತ್ನ**' ಪ್ರಶಸ್ತಿ ನೀಡಿ ಗೌರವಿಸಲಾಗುತ್ತಿದೆ.<br>• ಗ್ರಾಮೀಣ ಕ್ರೀಡೆಯಾದ ಕಬಡ್ಡಿ ಕ್ರೀಡೆಯನ್ನು ಪ್ರೋತ್ಸಾಹಿಸಲು ಅಂತರ-ರಾಷ್ಟ್ರೀಯ ಗುಣಮಟ್ಟದ ಕಬಡ್ಡಿ ಮ್ಯಾಟ್‌ಗಳನ್ನು ಒದಗಿಸಲಾಗಿದೆ.<br>• ಗ್ರಾಮೀಣ ಕ್ರೀಡೆಗಳು ಸೇರಿದಂತೆ ಕ್ರೀಡಾ ಕ್ಷೇತ್ರಕ್ಕೆ ಉತ್ತೇಜನ ನೀಡುತ್ತಿರುವ ದಕ್ಷಿಣ ಕನ್ನಡ ಜಿಲ್ಲೆಯ ಕೆಳಕಾಣಿಸಿದ ಸಂಸ್ಥೆಗಳ ಸೇವೆಯನ್ನು ಗುರುತಿಸಿ, ರೂ 5.00 ಲಕ್ಷ ನಗದು ಪುರಸ್ಕಾರ ಒಳಗೊಂಡ '**ಕರ್ನಾಟಕ ಕ್ರೀಡಾ ಪೋಷಕ**' ಪ್ರಶಸ್ತಿಯನ್ನು ನೀಡಲಾಗಿದೆ.<br>•<br><table><tr><th>ಕ್ರಸ</th><th>ಸಂಸ್ಥೆಯ ಹೆಸರು</th><th>ವರ್ಷ</th></tr><tr><td>1</td><td>ಆಳ್ವಾಸ್ ಶಿಕ್ಷಣ ಪ್ರತಿಷ್ಠಾನ, ಮೂಡುಬಿದಿರೆ</td><td>2017-18</td></tr><tr><td>2</td><td>ಮಂಗಳೂರು ವಿಶ್ವವಿದ್ಯಾಲಯ</td><td>2019-20</td></tr><tr><td>3</td><td>ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಎಜುಕೇಷನ್ ಟ್ರಸ್ಟ್ (ರಿ)</td><td>2021-22</td></tr><tr><td>4</td><td>ಬಾಲಾಂಜನೇಯ ಜಿಮ್ನಾಸಿಯಂ (ರಿ), ಮಂಗಳೂರು</td><td>2021-2</td></tr><tr><td>5</td><td>ಮಂಗಳ ಫ್ರೆಂಡ್ಸ್ ಕ್ಲಬ್, ಮಂಗಳೂರು</td><td>2022-23</td></tr></table><br>• ಗ್ರಾಮೀಣ ಕ್ರೀಡೆಯಾದ ಕುಸ್ತಿಯನ್ನು ಉತ್ತೇಜಿಸಲು ರೂ 10.00 ಲಕ್ಷಗಳ ವೆಚ್ಚದಲ್ಲಿ ಹೊಸ ಗರಡಿ ಮನೆ ನಿರ್ಮಿಸುವ ಹಾಗೂ ರೂ 2.00 ಲಕ್ಷಗಳ ವೆಚ್ಚದಲ್ಲಿ ಹಾಲಿಯಿರುವ ಗರಡಿಮನೆಗಳನ್ನು ದುರಸ್ತಿ/ಪುನಶ್ಚೇತನಗೊಳಿಸಲು ಅನುದಾನ ಬಿಡುಗಡೆ ಮಾಡಲಾಗುತ್ತಿದೆ. ಸದರಿ ಕಾರ್ಯಕ್ರಮದಡಿ 2021-22ನೇ ಸಾಲಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆ ಬಂಟ್ವಾಳ ತಾಲ್ಲೂಕಿನ ನರಿಕೊಂಬು ಗ್ರಾಮದಲ್ಲಿ ರೂ 10.00 ಲಕ್ಷಗಳ ವೆಚ್ಚದಲ್ಲಿ ಗರಡಿ ಮನೆ ನಿರ್ಮಿಸಲಾಗಿರುತ್ತದೆ.<br>• 2021-22 ಮತ್ತು 2022-23 ನೇ ಸಾಲಿನಲ್ಲಿ ಗ್ರಾಮೀಣ ಪ್ರದೇಶದ 40 ಸರ್ಕಾರಿ ಪ್ರೌಢಶಾಲೆಗಳಿಗೆ ಆಟದ ಮೈದಾನ ಅಭಿವೃದ್ಧಿ ಮತ್ತು ಕ್ರೀಡಾ ಸಾಮಗ್ರಿ ಖರೀದಿಸಲು ತಲಾ ರೂ. 25,000-00 ಗಳ ಅನುದಾನವನ್ನು ನೀಡಲಾಗಿದೆ.<br>• 2021-22 ಮತ್ತು 2022-23 ನೇ ಸಾಲಿನಲ್ಲಿ ಗ್ರಾಮೀಣ ಪ್ರದೇಶದ 42 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಿಗೆ ಆಟದ ಮೈದಾನ ಅಭಿವೃದ್ಧಿ ಮತ್ತು ಕ್ರೀಡಾ ಸಾಮಗ್ರಿ ಖರೀದಿಸಲು ತಲಾ ರೂ. 5,833-00 ಗಳ ಅನುದಾನವನ್ನು ನೀಡಲಾಗಿದೆ. |

| | | |
|---|---|---|
| | | • 2020-21ನೇ ಸಾಲಿನಲ್ಲಿ 36 ಯುವ ಸಂಘಗಳಿಗೆ ತಲಾ ರೂ. 16,666-00, 2021-22 ನೇ ಸಾಲಿನಲ್ಲಿ 42 ಯುವ ಸಂಘಗಳಿಗೆ ತಲಾ ರೂ. 14,286-00 ಹಾಗೂ 2022-23ನೇ ಸಾಲಿನಲ್ಲಿ 42 ಯುವ ಸಂಘಗಳಿಗೆ ತಲಾ ರೂ. 15,000-00 ಗಳ ಸಹಾಯಧನ ನೀಡಲಾಗಿದೆ.<br>• 2020-21ನೇ ಸಾಲಿನಲ್ಲಿ 36 ಯುವ ಸಂಘಗಳಿಗೆ ತಲಾ ರೂ. 11,905-00, 2021-22 ನೇ ಸಾಲಿನಲ್ಲಿ 42 ಯುವ ಸಂಘಗಳಿಗೆ ತಲಾ ರೂ. 11,905-00 ಹಾಗೂ 2022-23ನೇ ಸಾಲಿನಲ್ಲಿ 42 ಯುವ ಸಂಘಗಳಿಗೆ ತಲಾ ರೂ. 14,286-00 ಗಳ ಮೊತ್ತದ ಕ್ರೀಡಾಕಿಟ್ ವಿತರಿಸಲಾಗಿರುತ್ತದೆ. |
| ಉ) | ಮಂಗಳೂರು ನಗರದಲ್ಲಿ ಪ್ರಾರಂಭಿಸುವ ಮಲ್ಟಿ ಸ್ಪೋರ್ಟ್ಸ್ ಕಾಂಪ್ಲೇಕ್ಸ್‌ನಲ್ಲಿ ಕ್ರೀಡಾಳುಗಳ ಉಪಯೋಗಕ್ಕೆ ಯಾವಾಗ ನೀಡಲಾಗುವುದು; ಎಷ್ಟು ವರ್ಷದಿಂದ ಈ ಕಾಮಗಾರಿಗಳು ನಡೆಯುತ್ತಿವೆ; ಇದಕ್ಕೆ ವಿನಿಯೋಗಿಸಿದ ಹಣ ಎಷ್ಟು; ಯಾವ ಯಾವ ಕ್ರೀಡೆಗಳಿಗೆ ಅವಕಾಶ ನೀಡಲಾಗುತ್ತದೆ? (ವಿವರ ನೀಡುವುದು) | ಮಂಗಳೂರು ಸ್ಮಾರ್ಟ್ ಸಿಟಿ ಲಿಮಿಟೆಡ್ ವತಿಯಿಂದ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅಧೀನದಲ್ಲಿರುವ ಮಂಗಳೂರು ನಗರದ ಊರ್ವ ಮಾರುಕಟ್ಟೆ ಬಳಿಯ 1.13 ಎಕರೆ ಜಾಗದಲ್ಲಿ ರೂ 20.50 ಕೋಟಿ ವೆಚ್ಚದಲ್ಲಿ ಕಬಡ್ಡಿ ಮತ್ತು ಬ್ಯಾಡ್ಮಿಂಟನ್ ಒಳಾಂಗಣ ಕ್ರೀಡಾಂಗಣವನ್ನು ನಿರ್ಮಾಣ ಮಾಡಲಾಗುತ್ತಿದೆ. ಸದರಿ ಕಾಮಗಾರಿಯನ್ನು 2020-21ನೇ ಸಾಲಿನಲ್ಲಿ ಪ್ರಾರಂಭಿಸಲಾಗಿರುತ್ತದೆ.<br><br>ಈ ಕಾಮಗಾರಿಯಲ್ಲಿ ಮೂರು ಕಬಡ್ಡಿ ಮತ್ತು ಐದು ಬ್ಯಾಡ್ಮಿಂಟನ್ ಅಂಕಣಗಳು, ವಾಹನ ನಿಲುಗಡೆ ವ್ಯವಸ್ಥೆ, ಜಿಮ್ ಕೊಠಡಿ, ಬಟ್ಟೆ ಬದಲಾಯಿಸುವ ಕೊಠಡಿ, ಶೌಚಾಲಯಗಳು ಹಾಗೂ ಇನ್ನಿತರೆ ಸೌಲಭ್ಯಗಳು ಒಳಗೊಂಡಿರುತ್ತವೆ.<br><br>ಸದರಿ ಕಾಮಗಾರಿಯು ಪ್ರಸ್ತುತ ಶೇ 70 ರಷ್ಟು ಪೂರ್ಣಗೊಂಡಿದ್ದು, ಹೆಚ್ಚುವರಿಯಾಗಿ ಕೈಗೊಂಡಿರುವ ಕಾಮಗಾರಿಗಳನ್ನು ಪೂರ್ಣಗೊಳಿಸಲು ರೂ 15.00 ಕೋಟಿಗಳ ಅನುದಾನ ಅಗತ್ಯವಿದ್ದು, ಸದರಿ ಹೆಚ್ಚುವರಿ ಅನುದಾನಕ್ಕಾಗಿ ಮಂಗಳೂರು ಸ್ಮಾರ್ಟ್ ಸಿಟಿ ಲಿಮಿಟೆಡ್ ವತಿಯಿಂದ ಉನ್ನತ ಮಟ್ಟದ ಸಮಿತಿಗೆ ಪ್ರಸ್ತಾವನೆ ಸಲ್ಲಿಕೆಯಾಗಿರುತ್ತದೆ. ಸದರಿ ಪ್ರಸ್ತಾವನೆಗೆ ಅನುಮೋದನೆ ದೊರೆತ ನಂತರ ಶೀಘ್ರವಾಗಿ ಕಾಮಗಾರಿ ಪೂರ್ಣಗೊಳಿಸಿ, ಹಸ್ತಾಂತರಿಸಲಾಗುವುದು ಎಂದು ಮಂಗಳೂರು ಸ್ಮಾರ್ಟ್ ಸಿಟಿ ಲಿಮಿಟೆಡ್ ರವರು ತಿಳಿಸಿರುತ್ತಾರೆ. |

ವೈಎಸ್‌ಡಿ-ಇಬಿಬಿ/76/2024

(ಸಿದ್ದರಾಮಯ್ಯ)

**ಮುಖ್ಯಮಂತ್ರಿ**

## ಅನುಬಂಧ

## ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ವಿದ್ಯಾರ್ಥಿಗಳು/ ಯುವಜನರನ್ನು ಕ್ರೀಡೆಯಲ್ಲಿ ಪ್ರೋತ್ಸಾಹಿಸಲು ರಾಜ್ಯದಲ್ಲಿ ಅನುಷ್ಠಾನಗೊಳಿಸುತ್ತಿರುವ ಪ್ರಮುಖ ಕಾರ್ಯಕ್ರಮಗಳ ವಿವರ:

1. **ನಗದು ಪುರಸ್ಕಾರ:** ರಾಷ್ಟ್ರೀಯ ಮತ್ತು ಅಂತರ-ರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳಲ್ಲಿ ವಿಜೇತರಾದ ಕ್ರೀಡಾಪಟುಗಳಿಗೆ ಕೆಳಕಾಣಿಸಿದಂತೆ ನಗದು ಪುರಸ್ಕಾರವನ್ನು ನೀಡಲಾಗುತ್ತಿದೆ.

ರೂ.ಲಕ್ಷಗಳಲ್ಲಿ

| ಕ್ರ.ಸ | ವಿವರ | ಚಿನ್ನ | ಬೆಳ್ಳಿ | ಕಂಚು |
|---|---|---|---|---|
| 1 | ಒಲಂಪಿಕ್ಸ್ | 600.00 | 400.00 | 300.00 |
| 2 | ಏಷಿಯನ್ ಗೇಮ್ಸ್ | 35.00 | 25.00 | 15.00 |
| 3 | ಕಾಮನ್ ವೆಲ್ತ್ ಗೇಮ್ಸ್ | 35.00 | 25.00 | 15.00 |
| 4 | ವಿಶ್ವ ಕಪ್/ಚಾಂಪಿಯನ್ ಶಿಪ್ ( ಭಾರತ ಸರ್ಕಾರದಿಂದ ಅಂಗೀಕೃತವಾಗಿ ಭಾರತ ತಂಡದ ಭಾಗವಾಗಿ ಪ್ರತಿನಿಧಿಸಿರಬೇಕು) | 5.00 | 3.00 | 2.00 |
| 5 | ನ್ಯಾಷನಲ್ ಗೇಮ್ಸ್ (ಪ್ರತಿ ನಾಲ್ಕು ವರ್ಷಗಳಿಗೊಮ್ಮೆ ನಡೆಯುವ ಕ್ರೀಡೆಗಳು) | 5.00 | 3.00 | 2.00 |
| 6 | ನ್ಯಾಷನಲ್ ಚಾಂಪಿಯನ್ ಶಿಪ್ (ಒಲಂಪಿಕ್ ಕ್ರೀಡೆಗಳಿಗೆ) | 2.00 | 1.00 | 0.50 |
| 7 | ಜೂನಿಯರ್ ನ್ಯಾಷನಲ್ (ಒಲಂಪಿಕ್ ಕ್ರೀಡೆಗಳಿಗೆ) | 0.50 | 0.25 | 0.15 |
| 8 | ಸಬ್ ಜೂನಿಯರ್ ನ್ಯಾಷನಲ್ (ಒಲಂಪಿಕ್ ಕ್ರೀಡೆಗಳಿಗೆ) | 0.25 | 0.15 | 0.10 |

2. **ಏಕಲವ್ಯ ಪ್ರಶಸ್ತಿ:** ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ರಾಜ್ಯವನ್ನು ಪ್ರತಿನಿಧಿಸಿ ಸಾಧನೆ ಮಾಡಿದ ಕ್ರೀಡಾಪಟುಗಳಿಗೆ ಪ್ರತಿ ವರ್ಷ ಏಕಲವ್ಯ ಪ್ರಶಸ್ತಿ ನೀಡಲಾಗುತ್ತಿದೆ.

3. **ಜೀವಮಾನ ಸಾಧನೆ ಪ್ರಶಸ್ತಿ:** ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದ ಕ್ರೀಡಾಪಟುಗಳಿಗೆ ತರಬೇತಿ ನೀಡಿದ ರಾಜ್ಯದ ತರಬೇತುದಾರರಿಗೆ ಅವರ ಜೀವಮಾನ ಸಾಧನೆಗೆ ಜೀವಮಾನ ಸಾಧನೆ ಪ್ರಶಸ್ತಿಯನ್ನು ಪ್ರತಿ ವರ್ಷ ನೀಡಲಾಗುತ್ತಿದೆ.

4. **ಕ್ರೀಡಾ ಪೋಷಕ ಪ್ರಶಸ್ತಿ:** ಕ್ರೀಡೆಯ ಅಭಿವೃದ್ಧಿಗೆ ಗಣನೀಯ ಕೊಡುಗೆ ನೀಡಿದ ಖಾಸಗಿ ಸಂಘ-ಸಂಸ್ಥೆಗಳಿಗೆ ಉತ್ತೇಜನ ನೀಡಲು ಕ್ರೀಡಾ ಪೋಷಕ ಪ್ರಶಸ್ತಿಯನ್ನು ಪ್ರತಿ ವರ್ಷ ನೀಡಲಾಗುತ್ತಿದೆ.

5. **ಶೈಕ್ಷಣಿಕ ಶುಲ್ಕ ಮರುಪಾವತಿ:** ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ರಾಜ್ಯದಿಂದ ಪ್ರತಿನಿಧಿಸಿ ಸಾಧನೆ ಮಾಡಿದ ಕ್ರೀಡಾಪಟುಗಳಿಗೆ ವಾರ್ಷಿಕ ಗರಿಷ್ಟ ರೂ 50,000/- ವರೆಗೆ ಶೈಕ್ಷಣಿಕ ಶುಲ್ಕ ಮರುಪಾವತಿ ಮಾಡಲಾಗುತ್ತಿದೆ.

6. **ಕ್ರೀಡಾ ವಿದ್ಯಾರ್ಥಿ ವೇತನ:** ರಾಜ್ಯ ಮಟ್ಟದ ಪದಕ ವಿಜೇತರಾಗಿ ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಿದ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ರೂ 10,000/- ವಿದ್ಯಾರ್ಥಿ ವೇತನ ನೀಡಿ ಪ್ರೋತ್ಸಾಹಿಸಲಾಗುತ್ತಿದೆ.

7. **ಯುವ ಚೈತನ್ಯ':** ಯುವ ಸಂಘಗಳಿಗೆ 'ಯುವ ಚೈತನ್ಯ' ಕಾರ್ಯಕ್ರಮದಡಿ ಕ್ರೀಡಾ ಕಿಟ್ ಗಳನ್ನು ವಿತರಿಸಲಾಗುತ್ತಿದೆ.
8. ಪರಿಶಿಷ್ಟ ಜಾತಿ ಮತ್ತು ಪಂಗಡದ ಸಾಧಕ ಕ್ರೀಡಾಪಟುಗಳಿಗೆ ವಿಶೇಷ ನಗದು ಪುರಸ್ಕಾರ ವಿತರಿಸಲಾಗುತ್ತಿದೆ. ಅಂತರ-ರಾಷ್ಟ್ರೀಯ ರಾಷ್ಟ್ರೀಯ ಮತ್ತು ರಾಜ್ಯ ಮಟ್ಟದ ಕ್ರೀಡಾಕೂಟಗಳ ಪದಕ ವಿಜೇತರಿಗೆ ಕ್ರಮವಾಗಿ ತಲಾ ರೂ 5.00, 3.00 ಮತ್ತು 1.00 ಲಕ್ಷಗಳ ನಗದು ಪುರಸ್ಕಾರ ನೀಡಲಾಗುತ್ತಿದೆ.

9. **ಕ್ರೀಡಾ ವಸತಿ ಶಾಲೆ/ನಿಲಯ:** ಕ್ರೀಡಾ ವಸತಿ ಶಾಲೆ/ನಿಲಯಗಳಲ್ಲಿ ಪ್ರವೇಶ ಪಡೆಯುವ ಪ್ರತಿಭಾವಂತ ಯುವ ಕ್ರೀಡಾಪಟುಗಳಿಗೆ ಉಚಿತ ಊಟೋಪಹಾರ, ವಸತಿ, ಕ್ರೀಡಾ ತರಬೇತಿ ಮತ್ತು ಕ್ರೀಡಾ ಸಮವಸ್ತ್ರ ಒದಗಿಸಲಾಗುತ್ತಿದೆ. ದೈಹಿಕ ಕ್ಷಮತಾ ಪರೀಕ್ಷೆಗಳಲ್ಲಿ ಹಾಗೂ ಕ್ರೀಡಾ ಕೌಶಲ್ಯ ಪರೀಕ್ಷೆ ಆಧಾರಿತವಾಗಿ 5ನೇ ತರಗತಿ ಮೇಲ್ಪಟ್ಟ ಕ್ರೀಡಾಪಟುಗಳಿಗೆ ಆಯ್ಕೆ ಪ್ರಕ್ರಿಯೆ ನಡೆಸಿ, ಪ್ರವೇಶಾವಕಾಶ ಕಲ್ಪಿಸಲಾಗುತ್ತಿದೆ.

10. **ಗರಡಿ ಮನೆ ನಿರ್ಮಾಣ:** ಕುಸ್ತಿ ಕ್ರೀಡಾಪಟುಗಳಿಗೆ ಉತ್ತೇಜನ ನೀಡುವ ಸಲುವಾಗಿ ಗರಡಿ ಮನೆ ನಿರ್ಮಾಣಕ್ಕೆ ತಲಾ ರೂ 10.00 ಲಕ್ಷ ಅನುದಾನ ನೀಡಲಾಗುತ್ತಿದೆ. ಮತ್ತು ನವೀಕರಣಕ್ಕೆ ಆದ್ಯತೆ ನೀಡಲಾಗುತ್ತಿದೆ.

11. **ಯುವ ಶಕ್ತಿ ಕೇಂದ್ರ:** ಯುವಜನರ ದೈಹಿಕ ಸಾಮರ್ಥ್ಯವನ್ನು ಹೆಚ್ಚಿಸಲು ಇಲಾಖಾ ಕ್ರೀಡಾಂಗಣಗಳು, ಕ್ರೀಡಾ ವಸತಿ ನಿಲಯಗಳು ಮತ್ತು ಸರ್ಕಾರಿ ಕಾಲೇಜುಗಳಿಗೆ ಜಿಮ್ ಉಪಕರಣಗಳನ್ನು ಒದಗಿಸಲಾಗುವುದು.

12. **ರಾಜ್ಯ ಕ್ರೀಡಾ ಸಂಸ್ಥೆಗಳಿಗೆ ಅನುದಾನ:** ಮಾನ್ಯತೆ ಪಡೆದ ರಾಜ್ಯ ಕ್ರೀಡಾ ಸಂಸ್ಥೆಗಳಿಗೆ ಕ್ರೀಡಾಕೂಟಗಳ ಆಯೋಜನೆ, ತರಬೇತಿ ಶಿಬಿರಗಳ ಆಯೋಜನೆ ಹಾಗೂ ಕ್ರೀಡಾಕೂಟಗಳಿಗೆ ರಾಜ್ಯತಂಡದ ನಿಯೋಜನೆಗೆ ಅನುದಾನ ನೀಡಲಾಗುತ್ತಿದೆ.

13. ಜನರಲ್ ತಿಮ್ಮಯ್ಯ ರಾಷ್ಟ್ರೀಯ ಸಾಹಸ ಅಕಾಡೆಮಿಯ ಮೂಲಕ ಯುವಜನರಿಗೆ ಸಾಹಸ ಕ್ರೀಡಾ ಪ್ರಶಿಕ್ಷಕರಾಗಲು ವಿವಿಧ ಹಂತಗಳ ತರಬೇತಿಯನ್ನು ನೀಡಲಾಗುತ್ತಿದೆ.

14. ರಾಷ್ಟ್ರೀಯ ಸೇವಾ ಯೋಜನೆ ಮೂಲಕ ನಿಮ್ಹಾನ್ಸ್ ಸಂಸ್ಥೆಯ ಸಹಯೋಗದೊಂದಿಗೆ ಜೀವನ ಕೌಶಲ್ಯ ತರಬೇತಿಯನ್ನು ಅನುಷ್ಠಾನಗೊಳಿಸಲಾಗುತ್ತಿದೆ.

15. **ಅಮೃತ ಕ್ರೀಡಾ ದತ್ತು ಯೋಜನೆ':** ಭಾರತದ ಸ್ವಾತಂತ್ರ್ಯದ 75ನೇ ವರ್ಷದ ಆಚರಣೆಯ ಅಂಗವಾಗಿ 75 ಯುವ ಪ್ರತಿಭಾವಂತ ಕ್ರೀಡಾಪಟುಗಳನ್ನು ಗುರುತಿಸಿ, ಅವರಿಗೆ ಉತ್ತೇಜನ ನೀಡಲು '**ಅಮೃತ ಕ್ರೀಡಾ ದತ್ತು ಯೋಜನೆ**' ರೂಪಿಸಲಾಗಿದೆ. 2024ರ ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ರಾಷ್ಟ್ರಕ್ಕೆ ಕೀರ್ತಿ ತರಲು ಸಹಾಯಕವಾಗುವಂತೆ ಅವರ ಕ್ರೀಡಾ ತರಬೇತಿಗೆ ವಾರ್ಷಿಕ ತಲಾ ರೂ. 10.00 ಲಕ್ಷ ಅನುದಾನವನ್ನು ಒದಗಿಸಲಾಗಿದೆ.